# ಮೈಸೂರ ಗೆಜೆಟ್

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಏಪ್ರೆಲ್ ತಾ॥ 30, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

## ೨ನೇ ಭಾಗ.

### ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೀಫ್ ಜಡ್ಜ್‌ರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫ್ಫೇಸ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫ್ಫೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿಸರ್,
ಕಾಂಪ್ಟ್ರೋಲರ್.

---

ಅಂಚೇ ಇಲಾಖೆ.

ನಂ. 22—12. ತಾರೀಖು 13ನೇ ಏಪ್ರೆಲ್ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೆ ಆಫೀಸುಗಳು ಸ್ಥಾಪಿಸಲ್ಪಟ್ಟಿರುತ್ತೆ.

| ತಾಲ್ಲೂಕು. | ಅಂಚೆ ಆಫೀಸು ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು. |
|---|---|
| ಗೋರೀಬಿದನೂರು .. .. | ತರದಾಳು |
| ನಂಜನಗೂಡು .. .. | ಚಿಕ್ಕಯ್ಯನ ಛತ್ರ. |

ಬಿ. ಮರಿಗಂಗೈಯ್ಯ,
ಅಂಚೇ ಬರಹಿ.